ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ರಾಜ್ಯದಲ್ಲಿನ ರೇಷ್ಮೆ ಕೃಷಿಯ ಬಗ್ಗೆ

ಶ್ರೀ ಕವಟಗಿಮಠಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯಸಂಸ್ಥೆಗಳಕ್ಷೇತ್ರ):-

118 (119) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದೇಶದ ಒಟ್ಟು ರೇಷ್ಮೆ ಉತ್ಪಾದನೆಯಲ್ಲಿ ರಾಜ್ಯದ ಪಾಲು ಶೇ.46ರಷ್ಟಿದ್ದು, ಇದನ್ನು ಹೆಚ್ಚಿಸುವ ಬಗ್ಗೆ ಸರ್ಕಾರದ ಯೋಜನೆ ಇದೆಯೇ ;

(ಆ) ಉತ್ತರ ಕರ್ನಾಟಕ ಭಾಗದಲ್ಲಿ ಬಹಳಷ್ಟು ರೈತರು ರೇಷ್ಮೆ ಕೃಷಿಯನ್ನು ಜೀವನೋಪಾಯವನ್ನಾಗಿ ಮಾಡಿಕೊಂಡು ಜೀವನಸಾಗಿಸುತ್ತಿದ್ದು, ಬೆಳೆದ ಫಸಲಿನ ಮಾರುಕಟ್ಟೆಗಾಗಿ ದೂರದ ರಾಮನಗರಕ್ಕೆ ಬರಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ರಾಜ್ಯದಲ್ಲಿ ರೇಷ್ಮೆ ಹುಳು ಸಂರಕ್ಷಣಾ ಘಟಕಗಳು ಎಲ್ಲೆಲ್ಲಿ ಇವೆ; ಇಂತಹ ಘಟಕಗಳನ್ನು ಉತ್ತರ ಕರ್ನಾಟಕ ಭಾಗದಲ್ಲಿ ಸ್ಥಾಪಿಸಲು ಸರ್ಕಾರಕ್ಕಿರುವ ಸಮಸ್ಯೆಗಳೇನು ;

(ಈ) ಉತ್ತರ ಕರ್ನಾಟಕದಲ್ಲಿ ರೇಷ್ಮೆ ಕೃಷಿಗೆ ಪೂರಕವಾದ ವಾತಾವರಣವಿದ್ದು, ಅದನ್ನು ಅಭಿವೃದ್ಧಿಪಡಿಸಲು ಸರ್ಕಾರ ಯಾವ ಯಾವ ಹೊಸ ಯೋಜನೆಗಳನ್ನು ಹಮ್ಮಿಕೊಂಡಿದೆ ?